# ಬರ ನಿರ್ವಹಣಾ ಸಭೆ:ಬರಗಾಲ ಸಂದರ್ಭದ ಗಾಂಭೀರ್ಯತೆ ಅರಿತು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಜನಸಾಮಾನ್ಯರ ಅಹವಾಲುಗಳಿಗೆ ಸ್ಪಂದಿಸಿ:ಪ್ರಿಯಾಂಕ್ ಖರ್ಗೆ



ಗದಗ , ಮಾ–: ಬರಗಾಲ ಸಂದರ್ಭದ ಗಾಂಭೀರ್ಯತೆ ಅರಿತು ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಬೇಕು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿ ಬುಧವಾರ ಬರ ನಿರ್ವಹಣೆ ಕುರಿತು ಸಭೆಯ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಮುಂದಿನ ಎರಡು ಮೂರು ತಿಂಗಳ ಅವಧಿಯಲ್ಲಿ ಜನಸಾಮಾನ್ಯರಿಗೆ ಜಾನುವಾರುಗಳಿಗೆ ನೀರು ಮೇವಿನ ಸಮಸ್ಯೆ ತಲೆದೂರಿದಲ್ಲಿ ಸಮರ್ಪಕವಾಗಿ ಅಧಿಕಾರಿಗಳು ನಿರ್ವಹಣೆ ಮಾಡಬೇಕು. ಜನಸಾಮಾನ್ಯರ ಅಹವಾಲುಗಳಿಗೆ ಸಹಾನುಭೂತಿಯಿಂದ ಸ್ಪಂದಿಸಬೇಕು ಎಂದು ಸೂಚಿಸಿದರು.

ಕಾಮಗಾರಿ ಸ್ಥಳ ಪರಿಶೀಲಿಸಿ : ಜಿಲ್ಲೆಯಲ್ಲಿ ಜೆಜೆಎಂ ಬಾಕಿ ಉಳಿದಿರುವ ಕಾಮಗಾರಿ ಪೂರ್ಣಗೊಳಿಸಬೇಕು. ಈ ನಿಟ್ಟಿನಲ್ಲಿ ಆಯಾ ತಾಲೂಕಾ ಕಾರ್ಯನಿರ್ವಹಣಾಧಿಕಾರಿಗಳು ಗುತ್ತಿಗೆದಾರರೊಂದಿಗೆ ಹಾಗೂ ಪಿಡಿಓ ಗಳೊಂದಿಗೆ ಖುದ್ದು ಕಾಮಗಾರಿ ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿ ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ಬರಗಾಲದ ಕಾಮಗಾರಿ ಕೈಗೆತ್ತಿಕೊಂಡು ಶೀಘ್ರವಾಗಿ ನಿರ್ವಹಿಸಬೇಕು. ಗ್ರಾಮೀಣ ಭಾಗದ ಕಾಮಗಾರಿಗಳನ್ನು ಅಧಿಕಾರಿಗಳು ಖುದ್ದಾಗಿ ಸ್ಥಳ ಪರಿಶೀಲನೆ ನಡೆಸುವ ಮೂಲಕ ಸರ್ಕಾರದ ಅನುದಾನ ಸದ್ಬಳಕೆಯಾಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

ವಾಸ್ತವಾಂಶ ಅರಿತು ಕಾರ್ಯನಿರ್ವಹಿಸಿ: ಗ್ರಾಮೀಣ ಭಾಗದ ಜನರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿರ್ವಹಣೆಗೆ ವಾರಕ್ಕೊಂಡು ಬಾರಿ ಸಭೆ ನಡೆಸಬೇಕು ಹಾಗೂ ಸ್ಥಳ ಪರಿಶೀಲನೆ ಮಾಡಬೇಕು. ವಾಸ್ತವಾಂಸ ಅರಿಯುವ ಮೂಲಕ ಸಮಸ್ಯೆಯ ಪರಿಹಾರಕ್ಕೆ ಅಧಿಕಾರಿಗಳು ಮುಂದಾಗಬೇಕು.

ಅನುದಾನದ ಕೊರತೆಯಿಲ್ಲ : ಬರ ನಿರ್ವಹಣೆಗಾಗಿ ಅಧಿಕಾರಿಗಳು ಮೊದಲು ಎಸ್.ಡಿ.ಆರ್.ಎಫ್. ಮಾರ್ಗಸೂಚಿಗಳನು ಅರಿತು ಕಾಮಗಾರಿಗಳನು ಕೈಗೆತ್ತಿಕೊಳ್ಳಬೇಕು. ಎಸ್ ಡಿ ಆರ್ ಎಫ್ ಅನುದಾನ ಹಾಗೂ ಮಾರ್ಗಸೂಚಿಯಲ್ಲಿ ಬರದಿದ್ದಲ್ಲಿ ರಾಜ್ಯದ ಎಲ್ಲ ಜಿಲ್ಲಾ ಪಂಚಾಯತ್ ಗಳಿಗೆ 850 ಕೋಟಿ ರೂ.ಗಳನ್ನು ಒದಗಿಸಲಾಗಿದ್ದು ಈ ಅನುದಾನದಲ್ಲಿ ಅಗತ್ಯಕ್ಕನುಸಾರ ಕಾಮಗಾರಿಗಳನ್ನು ಕೈಗೊಳ್ಳಬೇಕು. ಗದಗ ಜಿಲ್ಲೆಗೆ 25 ಕೋಟಿಗಳನು ಈ ಹಿಂದೆಯೇ ಒದಗಿಸಲಾಗಿದ್ದು ಅದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಬರ ನಿರ್ವಹಣೆ ಮಾಡುವಂತೆ ತಿಳಿಸಿದರು.ಆದೇಶ ಪಾಲಿಸಿ: ಬರ ನಿರ್ವಹಣೆ ಕುರಿತಂತೆ ಈಗಾಗಲೇ ಮಾರ್ಗಸೂಚಿಗಳನು ಸರ್ಕಾರದಿಂದ ಹೊರಡಿಸಲಾಗಿದೆ ಅಲ್ಲದೇ ಮುಖ್ಯಮಂತ್ರಿಗಳು , ಕಂದಾಯ ಸಚಿವರು, ತೋಟಗಾರಿಕೆ ಸಚಿವರು , ಕೃಷಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರುಗಳು ಸೇರಿದಂತೆ ಸರ್ಕಾರದ ಎಲ್ಲ ಸಚಿವರು ಜಿಲ್ಲಾಡಳಿತಗಳೊಂದಿಗೆ ಸಭೆ ನಡೆಸಿ ಬರ ನಿರ್ವಹಣೆ ಕುರಿತಂತೆ ಸೂಚನೆಗಳನ್ನು ನೀಡಿದ್ದಾರೆ ಹಾಘೂ ಬರ ನಿರ್ವಹಣೆಗಾಗಿ ಅನುದಾನವನ್ನು ಸಹ ಒದಗಿಸಿದ್ದು ತಾಲೂಕಾ ಹಂತದಲ್ಲಿ ಟಾಸ್ಕ್ ಫೋರ್ಸ ಸಮಿತಿ ಸಭೆಗಳನ್ನು ನಡೆಸಿ ಕಾಮಗಾರಿಗಳನು ಕೈಗೊಳ್ಳುವಂತೆ ಹೇಳಿದರು.

ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ ಅವರು ಮಾತನಾಡಿ ಹಾಸ್ಟೆಲ್ ಗಳಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಯಾಗಬೇಕು. ಡಿಬಿಓಟಿ ಕಾಮಗಾರಿಗಳನ್ನು ಪೂರ್ಣಗೊಳೀಸಿದ ನಂತರವೇ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರ ಮಾಡಬೇಕು ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅವರು ಮಾತನಾಡಿ ಕಳೆದ ಎರಡು ತಿಂಗಳಿಂದ ಗ್ರಾಮೀಣ ಭಾಗದ ಕೆಲವೆಡೆ ಕುಡಿಯುವ ನೀರಿನ ಅಭಾವ ಸೃಷ್ಟಿಯಾಗಿದ್ದು ಸಮಸ್ಯೆ ಪರಿಹಾರಕ್ಕೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯ ಪಾಲಕ ಅಭಿಯಂತರರಿಗೆ ಸೂಚಿಸಲಾಗಿದ್ದರೂ ಸಹ ನೆಪ ಹೇಳುತ್ತಾ ಕಾಮಗಾರಿಯನ್ನು ಕೈಗೊಳ್ಳಲು ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಮಾತನಾಡಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ದಿನದಿಂದ ದಿನಕ್ಕೆ ಕೆಳ ಹಂತಕ್ಕೆ ಹೋಗುತ್ತಿದ್ದು ಇದರಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ತಿಳಿಸುತ್ತಾ ತಾಲೂಕಾವಾರು ನೀರಿನ ಮಟ್ಟದ ವಿವರ ನೀಡಿದರು. ಜಿಲ್ಲೆ0ಯಲ್ಲಿ 2023ರ ಅಕ್ಟೋಬರ್ ತಿಂಗಳಿನಲ್ಲಿ 6.83 ಮೀಟರ್ ಅಂತರ್ಜಲ ಮಟ್ಟವಿತ್ತು. ಫೆಬ್ರುವರಿ ಅಂತ್ಯದಲ್ಲಿ 13.08 ಮೀಟರ್ ಕೆಳಗಿಳಿದಿದೆ. ತಾಲೂಕುವಾರು ನೋಡುವುದಾದರೆ ಮುಂಡರಗಿ 6.90, ಗದಗ 9.53, ನರಗುಂದ 11.83, ರೋಣ 13.25, ಗಜೇಂದ್ರಗಡ 21.0, ಲಕ್ಷ್ಮೇಶ್ವರ 16.73, ಶಿರಹಟ್ಟಿ 12.8 ಮೀಟರ್‌ನಷ್ಟು ಕೆಳಗಿದೆ ಎಂದರು.

ಸಭೆಯಲ್ಲಿ ತೆರಿಗೆ ಸಂಗ್ರಹ, ಕೂಸಿನ ಮನೆ ಕಾಮಗಾರಿ, ನರೇಗಾ ಕಾಮಗಾರಿ, ಗ್ರಂಥಾಲಯಗಳ ಸೌಲಭ್ಯ , ಹಾಸ್ಟೆ ಲ್ ಗಳಿಗೆ ಕುಡಿಯುವ ನೀರು ಪೂರೈಕೆ ಕುರಿತಂತೆ ಚರ್ಚಿಸಲಾಯಿತು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಬಿ. ದೇವರಮನಿ, ಪಂಚಾಯತ್ ರಾಜ್ ಇಲಾಖೆಯ ಕಾರ್ಯಪಾಲಕ ಅಭಿಯಂತರ ಎಸ್.ಆರ್.ಗೌಡರ, ಜಿ.ಪಂ. ಮುಖ್ಯ ಲೆಕ್ಕಾಧಿಕಾರಿ ಪ್ರಶಾಂತ ಜೆ.ಸಿ, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗುಣ್ಣವರ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಕರಿಯಲ್ಲಪ್ಪ ಕೆ, ಸೇರಿದಂತೆ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಹಾಜರಿದ್ದರು.

# ಕಾಲ ಕಾಲಕ್ಕೆ ಮಳೆಯಾಗಬೇಕಾದಲ್ಲಿ ಗಿಡ ಮರಗಳನ್ನು ಬೆಳೆಸಿ ಬುಡಾ ಅಧ್ಯಕ್ಷ ಜೆ.ಎಸ್.ಆಂಜಿನೇಯಲು



ಬಳ್ಳಾರಿ ಮಾ–: ಪ್ರತಿಯೊಂದು ಮರವು ಮಾನವನ ಜೀವ, ಮಾನವ ಜೀವಂತವಾಗಿ ಇರಲು ಗಿಡ ಮರಗಳು ಅನಿವಾರ್ಯ ಕಾಲ ಕಾಲಕ್ಕೆ ಮಳೆಯಾಗಬೇಕದಲ್ಲಿ ಗಿಡ ಮರಗಳನ್ನು ಬೆಳೆಸುವುದು ಅನಿವಾರ್ಯ ಎಂದು ಬುಡಾ ಅಧ್ಯಕ್ಷ ಆಂಜಿನೇಯುಲು ತಿಳಿಸಿದರು.

ಅವರು ನಗರದ 20ನೇ ವಾರ್ಡ್‌ನ ರಾಘವೇಂದ್ರ ಕಾಲೋನಿಯ ಎರಡನೆ ಹಂತದ ಆದರ್ಶ ಉದ್ಯಾನವನ ಅಭಿವೃದ್ಧಿ ಸಂಘದವತಿಯಿಂದ ಹಮ್ಮಿಕೊಂಡಿದ್ದ ಎರಡನೇ ಬಾರಿಗೆ ಆಯ್ಕೆಯಾಗಿರುವ ಜೆ.ಎಸ್ ಆಂಜಿನೇಯಲು ಇವರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ನಾನು ಬುಡಾ ಅಧ್ಯಕ್ಷರಾಗಿ ಎರಡನೇ ಅವಧಿಗೆ ಅಧ್ಯಕ್ಷರಾಗಿರುವುದು ಬಳ್ಳಾರಿ ಜನತೆಯ ಆಶೀರ್ವಾದ, ಮುಂಬರುವ ಮಳೆಗಾಲದಲ್ಲಿ ಪ್ರತಿ ಮನೆ ಮನೆಗಳಲ್ಲಿ ಗಿಡ ನೆಡುವ ಕಾರ್ಯಕ್ರಮ ಕೈಗೊಳ್ಳಲಾಗುವುದು ಗಿಡ ಮರಗಳು ಯಾರಿಗಾದರೂ ಬೇಕಾದಲ್ಲಿ ನನ್ನನ್ನು ಸಂಪರ್ಕಿಸಬಹುದು, ಮಾನವನಿಗೆ ಹುಟ್ಟು ಸಾವು ಅನಿವಾರ್ಯ ಮರಗಳು ಮನುಷ್ಯನ ಜೀವವನ್ನು ಉಳಿಸುತ್ತವೆ.ಪ್ರತಿ ಮನಷ್ಯ ಗಿಡ ಅತ್ಯಂತ ಅವಶ್ಯಕ ಅದೇ ರೀತಿಯಾಗಿ ಜೀವ ಹೋದ ನಂತರ ರುದ್ರಭೂಮಿ ಅವಶ್ಯಕ ಎಂಬಂತೆ ಮೃತರ ಅಂತ್ಯ ಸಂಸ್ಕಾರ ಮಾಡುವ ರುದ್ರಭೂಮಿ ಪ್ರದೇಶಗಳಲ್ಲಿ ಕಾಂಪೌಂಡ್, ಕೊಳವೆಬಾವಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿದ್ಧ, ಎಂದು ಅವರು ತಿಳಿಸಿದರು. ನಗರದ ಎಲ್ಲಾ ಉದ್ಯಾನಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ನನ್ನ ಕಳೆದ ಅವದಿಯಲ್ಲಿ ಬೂಡಾವತಿಯಿಂದ ಸುಮಾರು ಮೂರು ಸಾವಿರ ಸಸಿಗಳನ್ನು ನೆಟ್ಟಿದ್ದೇನು ಅದರಲ್ಲಿ ಈಗ ಎರಡು ವರೆ ಸಾವಿರ ಸಸಿಗಳು ಗಿಡಗಳಾಗಿ ಬೆಳೆದೆದಿವೆ. ಪ್ರಾಧಿಕಾರದವತಿಯಿಂದ ಸಸಿಗಳನ್ನು ಮತ್ತು ಗ್ರಿಲ್ ಗಳನ್ನು ನೀಡಲಾಗುವುದು ಅದನ್ನು ಬೆಳೆಸುವ ಜವಬ್ದಾರಿ ನಿಮ್ಮದು ಎಂದು ಸಾರ್ವಜನಿಕರಿಗೆ ತಿಳಿಸಿದರು.

ಬಳಿಕ ಆದರ್ಶ ಉದ್ಯಾನವನ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೆಕೋಡಪ್ಪ ಮಾತನಾಡಿ, ಆಂಜೀನೇಯಲು ಎರಡನೇ ಬಾರಿಗೆ ಬುಡಾ ಅಧ್ಯಕ್ಷರಾಗಿರುವುದು ಸಂತಸ ತಂದಿದೆ. ಬಳ್ಳಾರಿಯ ಅಭಿವೃದ್ದಿಗೆ ಅಂಜನೇಯಲು ಮರಳಿ ಬಂದಿದ್ದಾರೆ ಎಂದು ಅವರ ಕಾರ್ಯವನ್ನು ಶ್ಲಾಘಿಸಿದರು,ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯರಾದ ವಿವೇಕ್ (ವಿಕ್ಕಿ,) ಮುಲ್ಲಂಗಿ ನಂದೀಶ್, ಜೆಡಿಎಸ್ ಜಿಲ್ಲಾ ಅಧ್ಯಕ್ಷ ಮೀನಳ್ಳಿ ತಾಯಣ್ಣ, ಬುಡಾ ಮಾಜಿ ಅಧ್ಯಕ್ಷ ಮಾರುತಿ ಪ್ರಸಾದ್, ಆದರ್ಶ ಉದ್ಯಾನವನ ಅಭಿವೃದ್ಧಿ ಸಂಘದ ಪದಾಧಿಕಾರಿಗಳಾದ ಸುರೇಶ್ಡ, ಜಿ.ನಾಗರಾಜು, ನೆಟ್ಟಕಲ್ಲಪ್ಪ, ತಲ್ಲಂ ಕಿಶೋರ್ ಸೇರಿದಂತೆ ಸಮಿತಿಯ ನಲವತ್ತು ಸಜನ ಸದಸ್ಯರು, ಕಾಂಗ್ರೆಸ್ ಮುಖಂಡರಾದ ಪದ್ಮಾವತಿ.ಪ್ರದೇಶದ ಪ್ರಮುಖರಾದ ಗೋಪಾಲರೆಡ್ಡಿ, ರಾಮಮೋಹನರೆಡ್ಡಿ, ವೆಂಕಟರೆಡ್ಡಿ, ಸೇರಿದಂತೆ ಉದ್ಯಾನವನದಲ್ಲಿ ಪ್ರತಿದಿನ ವಾಯು ವಿಹಾರ ಮಾಡುವ ಜನರು ಉಪಸ್ಥಿತರಿದ್ದರು.

# ಬೇಸಿಗೆಯಲ್ಲಿ ಸಾರ್ವಜನಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸಿ: ಡಿಹೆಚ್‌ಓ ಡಾ.ವೈ.ರಮೇಶಬಾಬು

ಬಳ್ಳಾರಿ,ಮಾ–: ಬೇಸಿಗೆಯಲ್ಲಿ ಬಿಸಲಿನ ತಾಪವು ಹೆಚ್ಚಾಗಿರುವುದರಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಕೋರಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಸಾರ್ವಜನಿಕರು ಬಿಸಿಲಿನ ತಾಪಮಾನದಿಂದ ಹೇಗೆ ರಕ್ಷಿಸಿಕೊಳ್ಳಬೇಕು ಮತ್ತು ಬಿಸಿಲಿನ ಬೇಗೆಯಿಂದ ಮನುಷ್ಯ ಶಾಖಾಘಾತಕ್ಕೊಳಗಾದಾಗ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಈ ಕೆಳಕಂಡಂತೆ ತಿಳಿಸಿದ್ದಾರೆ.

ಏನು ಮಾಡಬೇಕು:*ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಕೈಗೆಟುಕುವಂತೆ ಕುಡಿಯುವ ನೀರನ್ನು ಇಟ್ಟುಕೊಳ್ಳಿ. ಆಗಾಗ್ಗೆ ನಿಧಾನವಾಗಿ ಧಾರಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಹಣ್ಣಿನ ರಸ, ಪಾನಕಗಳನ್ನು ಕುಡಿಯಿರಿ. ಹತ್ತಿಯ ನುಣುಪಾದ ಬಟ್ಟೆ, ಟಿಶ್ಯೂ ಕರವಸ್ತ್ರದಿಂದ ಬೆವರನ್ನು ಒರೆಸಿರಿ. ನೀರು, ಮಜ್ಜಿಗೆ, ಎಳೆನೀರು ಕುಡಿಯಬಹುದು. ಬೆಚ್ಚಗಿನ, ಮಸಾಲೆ ರಹಿತ, ಶುದ್ದ ಸಾತ್ವಿಕ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ. ಮನೆಯಿಂದ ಹೊರಗಡೆ ಹೋಗುವಾಗ ಜೊತೆಯಲ್ಲಿ ತಪ್ಪದೇ ಶುದ್ದ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು ಎಂದು ಹೇಳಿದ್ದಾರೆ.

ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ, ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀರ್ವ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು. ಇಲ್ಲವೇ 104ಕ್ಕೆ ಕರೆ ಮಾಡಬೇಕು. ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಿ ಎಂದು ಅವರು ತಿಳಿಸಿದ್ದಾರೆ.

ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿರಿ ಎಂದು ಅವರು ಮನವಿ ಮಾಡಿದ್ದಾರೆ.ಏನು ಮಾಡಬಾರದು:*ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ (ಬಾಯಾರಿಕೆಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ. ಕಾಫಿ, ಟೀ, ಅತಿ ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮಧ್ಯಪಾನ ವರ್ಜಿಸಬೇಕು.



ಬಿಗಿಯಾದ ಗಾಳಿಯಾ ಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ಹಾನಿಯಾಗುವ ಸಂಭವವಿರುತ್ತದೆ).

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸದೇ ಇರುವ ನೀರನ್ನು ಮತ್ತು ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬಾರದು. ಕೈಗಳನ್ನು ತೊಳೆದುಕೊಳ್ಳದೇ ಆಹಾರವನ್ನು ಸೇವಿಸಬೇಡಿ, ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಬಯಲು ಪ್ರದೇಶಗಳಲ್ಲಿ ಮಲ, ಮೂತ್ರ ವಿಸರ್ಜನೆ ಮಾಡಬಾರದು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಮತ್ತು ಕತ್ತಿರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು. ತಯಾರಿಸಿದ ಆಹಾರವನ್ನು ಮುಚ್ಚಳದಿಂದ ಮುಚ್ಚಬೇಕು ಎಂದು ಹೇಳಿದ್ದಾರೆ.

ಶಾಖಾಘಾತದ ಲಕ್ಷಣಗಳು:*ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಮನುಷ್ಯನು ಶಾಖಾಘಾತಕ್ಕೆ ಒಳಗಾಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಅಸಂಗತ ಮಾತು, ವ್ಯತ್ಯಸ್ಥ ಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ.ಶಾಖಾಘಾತಕ್ಕೆ ಚಿಕಿತ್ಸೆ:*ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ, ಅಂಗಾತ ಮಲಗಿಸಿ, ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಇಲ್ಲವೇ ಹತ್ತಿರದ ವೈದ್ಯರನ್ನು ಕರೆಸಬೇಕು.ಎಲ್ಲಾ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೇಸಿಗೆಯಲ್ಲಿ ಬರಬಹುದಾದ ರೋಗಗಳ ಆರೈಕೆಗಾಗಿ ಓಆರ್‌ಎಸ್, ಐವಿ ಪ್ಲೂಯಿಡ್ಸ್ ಮತ್ತು ಜೀವರಕ್ಷಕ ಔಷಧಗಳ ದಾಸ್ತಾನು ಇಟ್ಟುಕೊಳ್ಳುವಂತೆ ಹಾಗೂ ಆರೋಗ್ಯಾಧಿಕಾರಿಗಳು ನೀರಿನ ಗುಣಮಟ್ಟದ ಪರೀಕ್ಷೆಯನ್ನು ನಿಯಮಿತವಾಗಿ ಮಾಡುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಸೂಚಿಸಿದ್ದಾರೆ.

# ಸಿದ್ದರಾಮಯ್ಯ ಹೇಳಿರುವುದೆಲ್ಲ ಬರಿ ಸುಳ್ಳು ಚರ್ಚೆಗೆ ಬನ್ನಿ .ರವಿಕುಮಾರ್




ಬಳ್ಳಾರಿ ಮಾ–: :ಕೇಂದ್ರ ಸರ್ಕಾರದ ಬರಬೇಕಾದ ತೆರಿಗೆ ಪಾಲಿನ ವಿಚಾರದಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ. ಯಾವ ಸರ್ಕಾರದಲ್ಲಿ ಹೆಚ್ಚಿನ ಅನುದಾನ ಬಂದಿದೆ ಎನ್ನುವ ವಿಚಾರದಲ್ಲಿ ಚರ್ಚೆಗೆ ಬನ್ನಿ.ಬಹಿರಂಗ ಚರ್ಚೆಗೆ ಸಿದ್ಧ ಎಂದ ಪರಿಷತ್ತು ಸದಸ್ಯ ರವಿ ಕುಮಾರ್ ಸವಾಲೆಸೆದರು. ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿ ಗೋಷ್ಠಿ ಉದ್ದೇಶಿಸಿ ಮಾತನಾಡಿ ಅವರು,ಯುಪಿಎ ಸರ್ಕಾರದಲ್ಲಿ ಹತ್ತು ವರ್ಷಕ್ಕೆ ಬಂದಿರುವುದು 81,795 ಕೋಟಿ ಹಣ.ಎನ್ ಡಿಎ ಮೈತ್ರಿಕೂಟದಲ್ಲಿ 2,85,452 ಕೋಟಿ ಹಣ ತೆರಿಗೆ ರೂಪದಲ್ಲಿ ಬಂದಿದೆ ಎಂದರು.

ಸಿದ್ದರಾಮಯ್ಯ ಹೇಳಿರುವುದೆಲ್ಲ ಬರಿ ಸುಳ್ಳು.ಬಹಿರಂಗ ಚರ್ಚೆಗೆ ಬನ್ನಿ.ಕೇಂದ್ರ ಸರ್ಕಾರ ಮಲತಾಯಿ ಧೋರಣೆ ತೋರುತ್ತಿದೆ ಎಂದು ಹೇಳುವ ಸಿದ್ದರಾಮಯ್ಯಗೆ ಟೀಕೆ ಮಾಡೋದು ಬಿಟ್ಟರೆ ಬೇರೇನು ಗೊತ್ತಿಲ್ಲ.ಅನುದಾನದ ವಿಚಾರದಲ್ಲಿ ಸರ್ಕಾರದ ವಿರುದ್ಧ ಶಾಸಕರು ಅಸಮಾಧಾನಗೊಂಡಿದ್ದಾರೆ.ಸರ್ಕಾರ ಹಳೇ ಕಲ್ಲು ಹೊಸ ಬಿಲ್ ಹೊಸ ಘೋಷ ವಾಕ್ಯ ಪ್ರಾರಂಭ ಮಾಡಿದ್ದಾರೆ ಎಂದರು.ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಹೇಳುತ್ತಾರೆಂದರೆ ಕಾನೂನು ಸುವ್ಯವಸ್ಥೆ ಏನಾಗಿದೆ? ,ಬಾಂಬ್ ಬ್ಲಾಸ್ಟ್ ರಾಜ್ಯದಲ್ಲಿ ಏನೆಲ್ಲಾ ಅನಾಹುತ ನಡೆಯುತ್ತಿದ್ದರೂ ಕಾನೂನು ಸುವ್ಯವಸ್ಥಿತ ಎಲ್ಲಿದೆ?ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಕೂಗಿದ ಪ್ರಕರಣದಲ್ಲಿ ಮೊದಲ ಅರೋಪಿ ನಾಸೀರ್ ಸಾಬ್ ಎಂದು ಪ್ರಕರಣ ದಾಖಲಿಸಿ ವಿಚಾರಣೆ ಪಡಿಸಬೇಕು. ಸರ್ಕಾರ ಎಲ್ಲದರಲ್ಲೂ ವಿಫಲವಾಗಿದೆ ಮೂರು ಜನರನ್ನು ಬಂಧಿಸಿದ್ದಾರೆ.ಇನ್ನುಳಿದವರನ್ನು ಯಾಕೆ ಬಂಧಿಸಿಲ್ಲ? ಪಾಸ್ ನೀಡಿದ್ದು 25 ಜನರಿಗೆ ಎಲ್ಲರನ್ನೂ ಬಂಧಿಸಬೇಕು.ಎಸ್ ಸಿ ಎಸ್ ಟಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ದಲಿತರಿಗೆ ವಂಚನೆ ಮಾಡುತ್ತಿದ್ದಾರೆ

ಭಾರತ ದೇಶ ಮೋದಿ ನಾಯಕತ್ವದಲ್ಲಿ ಅಭಿವೃದ್ಧಿ ಗೊಳುತ್ತಿದ್ದು ಅರ್ಥಿಕತೆಯಲ್ಲಿ 5ನೇ ಸ್ಥಾನದಲ್ಲಿದೆ. ಕರ್ನಾಟಕ ಕಾಂಗ್ರೆಸ್ ಸರ್ಕಾರದಿಂದ ಕಾನೂನು ಸುವ್ಯವಸ್ಥೆ ಸಂಪೂರ್ಣ ವಿಫಲವಾಗಿದೆ. ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ಮಾಡಿದರು.

# ಮಕ್ಕಳಲ್ಲಿ ಸೃಜನಶೀಲ ಅಭಿವ್ಯಕ್ತಿ, ಜ್ಞಾನ ಜಾಗೃತಗೊಳಿಸಿ: ಸಂತೋಷ ಬಂಡೆ



ವಿಜಯಪುರ: ಇಂದಿನ ವಿದ್ಯಾರ್ಥಿಗಳಲ್ಲಿ ಗ್ರಹಿಕಾ ಶಕ್ತಿ, ಆಲೋಚನಾ ಶಕ್ತಿ, ಆಸಕ್ತಿಯ ಕೌಶಲ್ಯಗಳ ಜೊತೆಗೆ ಸೃಜನಶೀಲ ಅಭಿವ್ಯಕ್ತಿ ಮತ್ತು ಜ್ಞಾನವನ್ನು ಜಾಗೃತಗೊಳಿಸುವಲ್ಲಿ ಶಿಕ್ಷಕರ ಪಾತ್ರ ಅನನ್ಯವಾಗಿದೆ ಎಂದು ಹಿರೇರೂಗಿ ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಅವರು ತಾಲೂಕಿನ ಜಂಬಗಿ ಗ್ರಾಮದ ಶ್ರೀ ಬಿ ಎಂ ಪಾಟೀಲ ಸರಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ ಶಾಲಾ ವಾರ್ಷಿಕೋತ್ಸವ ಹಾಗೂ 10ನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಮುಖ್ಯ ಉಪನ್ಯಾಸಕರಾಗಿ ಮಾತನಾಡಿದರು. ಶಿಕ್ಷಕರು ಬಿತ್ತಿದ ಜ್ಞಾನ, ಬುದ್ಧಿವಂತಿಕೆ, ಮೌಲ್ಯಗಳು ವಿದ್ಯಾರ್ಥಿಯ ಜೀವನವನ್ನು ಪರಿವರ್ತಿಸುತ್ತವೆ. ವಿದ್ಯಾರ್ಥಿಗಳ ಬೆನ್ನೆಲುಬಾದ ಶಿಕ್ಷಕರು ಪ್ರತಿಯೊಬ್ಬರ ಜೀವನಕ್ಕೆ ಸ್ಫೂರ್ತಿಯಾಗಿ, ವಿದ್ಯಾರ್ಥಿಗಳಿಗೆ ನೀತಿಯುತ ಪ್ರಜ್ಞೆ, ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುತ್ತಾರೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕಿ ರೇಣುಕಾ ಕೊಣ್ಣೂರ ಮಾತನಾಡಿ,ಸಮಾಜಕ್ಕೆ ಧನಾತ್ಮಕ ಮತ್ತು ಪ್ರೇರಿತ ಭವಿಷ್ಯದ ಪೀಳಿಗೆಯನ್ನು ನಿರ್ಮಿಸುವ ಸಾಮರ್ಥ್ಯವನ್ನು ಶಿಕ್ಷಕರು ಹೊಂದಿದ್ದಾರೆ. ಅವರು ಮಕ್ಕಳಿಗೆ ಮಾದರಿಯಾಗಿ, ಯುವಜನರಿಗೆ ಶಿಕ್ಷಣದ ಶಕ್ತಿಯನ್ನು ನೀಡುತ್ತಾರೆ ಎಂದು ಹೇಳಿದರು. ವೇದಮೂರ್ತಿ ಗುರುಬಸಯ್ಯ ಹಿರೇಮಠ ಸಾನಿಧ್ಯ ವಹಿಸಿದ್ದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರೀಶೈಲ ಮಸೂತಿ ಉದ್ಘಾಟಿಸಿದರು.ಬಸವರಾಜ ಭಾವಿಮನಿ, ಮುತ್ತಪ್ಪ ನಾಯ್ಕೊಡಿ,ಶಿವಪ್ಪ ಪೂಜಾರಿ,ಶರಣಪ್ಪ ಕಡ್ಲೆವಾಡ,ಹನಮಂತ ಉಕ್ಕಲಿ,ಶಿಕ್ಷಕರಾದ ರಿಯಾಜ್ ಮುಜಾವರ, ಎ ಆರ್ ತುಬಾಕೆ, ನಿಂಗನಗೌಡ ಬಿರಾದಾರ, ಸಂತೋಷಕುಮಾರ ಜತ್ತಿ,ಕಲ್ಲಪ್ಪ ಕಾಂಬಳೆ, ಬಾಳು ಮಾನೆ,ಆರತಿ ಗಾಣಿಗೇರ, ವಿದ್ಯಾರ್ಥಿ ಪ್ರತಿನಿಧಿ ಸವಿತಾ ಗೇರಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಳೆದ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಬಸವರಾಜ ಅವಟಿ, ಗುರುಬಾಯಿ ಉಕ್ಕಲಿ ಅವರನ್ನು ಸನ್ಮಾನಸಲಾಯಿತು. ಶಿಕ್ಷಕರಾದ ಮಲ್ಲಪ್ಪ ಸ್ವಾಗತಿಸಿದರು.ಚಂದ್ರಶೇಖರ ಅರವತ್ತು ವರದಿ ವಾಚಿಸಿದರು. ಪ್ರವೀಣ ಮಂಗಳೂರೆ ನರೂಪಿಸಿದರು.ಸಾವಿತ್ರಿ ಅಂಗಡಿ ವಂದಿಸಿದರು.

# ಲಾರಿ ಅಪಘಾತ–ಮಾನವೀಯತೆ ಮೆರೆದ ಕೆಆರ್‌ಪಿಪಿ ಲಕ್ಷ್ಮಿ ಅರುಣ



ಬಳ್ಳಾರಿ ಮಾ. ಬಳ್ಳಾರಿ ಜಿಲ್ಲೆಯ ತುಮಟಿ ತಾಂಡಾದ ಸಮೀಪದಲ್ಲಿ ನಡೆದ ಮೈನಿಂಗ್ ಲಾರಿಗಳ ಅಪಘಾತದಲ್ಲಿ ಓರ್ವ ಚಾಲಕ ಗಾಯಗೊಂಡಿದ್ದು, ಅದೇ ರಸ್ತೆಯಲ್ಲಿ ಹೋಗುತಿದ್ದ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಧಿನಾಯಕಿ ಶ್ರೀಮತಿ ಲಕ್ಷ್ಮಿಅರುಣ ಜನಾರ್ದನರೆಡ್ಡಿ ಯವರು ಮಾನವೀಯತೆಯನ್ನು ಮೆರೆದು ಕೂಡಲೆ ಆಂಬುಲೆನ್ಸ್ ಕರೆಸಿ ಆಸ್ಪತ್ರೆಗೆ ರವಾನಿಸಿದರು.

ನಂತರ ವಿಮ್ಸ್ ಅಧಿಕಾರಿಗಳ ಜೊತೆ ಮಾತನಾಡಿ ತುರ್ತು ಚಿಕಿತ್ಸೆ ನೀಡಬೇಕೆಂದು ತಿಳಿಸಿದರು.

ಈ ಸಂಧರ್ಬದಲ್ಲಿ ದಿವಾಕರ್, ದಮ್ಮೂರು ಶೇಖರ್ ಇನ್ನಿತರರು ಉಪಸ್ಥಿತರಿದ್ದರು.

# ಪತ್ರಕರ್ತ, ಸಾಹಿತಿ ಕಲ್ಲಪ್ಪ ಶಿವಶರಣ ವಿರಚಿತ 'ಕಲ್ಲು ಮನಸ್ಸು' ಕೃತಿ ಬಿಡುಗಡೆಗೊಳಿಸಿದ ಸಚಿವ ಶಿವರಾಜ ಎಸ್. ತಂಗಡಗಿ



ವಿಜಯಪುರ : ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿನ ನಯನ ರಂಗಮಂದಿರದಲ್ಲಿ ಕರ್ನಾಟಕ ಸರಕಾರ ಕನ್ನಡ ಪುಸ್ತಕ ಪ್ರಾಧಿಕಾರಕ್ಕೆ ಆಯ್ಕೆಯಾದ ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲೆಯ ಪತ್ರಕರ್ತ, ಸಾಹಿತಿ ಕಲ್ಲಪ್ಪ ಶಿವಶರಣ ವಿರಚಿತ 'ಕಲ್ಲು ಮನಸ್ಸು' ಕಲ್ಲರಳಿ ಹೂಮಸು ಕೃತಿಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಅವರು ಬಿಡುಗಡ 'ಗೊಳಿಸಿದರು.ಇದೇ ಸಂದರ್ಭದಲ್ಲಿ 'ಕಲ್ಲು ಮನಸ್ಸು' ಕಲ್ಲರಳಿ ಹೂಮಸು ಕೃತಿ ಕನ್ನಡ ಪುಸ್ತಕ ಪ್ರಾಧಿಕಾರಕ್ಕೆ ಆಯ್ಕೆಯಾದ ಹಿನ್ನೆಲೆಯಲ್ಲಿ ಸಚಿವ ಶಿವರಾಜ ಎಸ್. ತಂಗಡಗಿ, ಹೆಸರಾಂತ ಸಾಹಿತಿ ಜೋಗಿ (ಗಿರೀಶ್‌ರಾವ್ ಹತ್ವಾರ್), ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ. ಧರಣಿದೇವಿ ಅವರು ಮುಖ್ಯ ವೇದಿಕೆಯ ಮೇಲೆ ಪ್ರಶಸ್ತಿ ಫಲಕಗಳನ್ನು ಸಾಹಿತಿ, ಪತ್ರಕರ್ತ ಕಲ್ಲಪ್ಪ ಶಿವಶರಣ ಅವರಿಗೆ ನೀಡಿ ಗೌರವಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿಗಳು ಸೇರದಿಂತೆ ಅನೇಕರು ಇದ್ದರು.

# ಶ್ರೀ ಸುಂಕ್ಲಮ್ಮ ದೇವಿಯ ಕುಂಭೋತ್ಸವದಲ್ಲಿ ಪಾಲ್ಗೊಂಡ ಎಂ.ಎಸ್.ಸಿದ್ದಪ್ಪ



ಬಳ್ಳಾರಿ ಮಾ–: ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ ಶಾನವಾಸಪುರ ಗ್ರಾಮದಲ್ಲಿ ಶ್ರೀ ಸುಂಕ್ಲಮ್ಮ ದೇವಿಯ ಕುಂಭೋ ತ್ಸವದಲ್ಲಿ ಸಿರುಗುಪ್ಪ ಮಾಜಿ ಶಾಸಕ ಸೋಮಲಿಂಗಪ್ಪನವರ ಪುತ್ರ, ಯುವಮೋರ್ಚ ಜಿಲ್ಲಾಧ್ಯಕ್ಷರಾದ ಎಂ.ಎಸ್.ಸಿದ್ದಪ್ಪನವರು ಭಾಗವಹಿಸಿ ದೇವಿಯ ಆಶೀರ್ವಾದ ಪಡೆಯಲಾಯಿತು. ಈ ಸಂಧರ್ಬದಲ್ಲಿ ಕಾರ್ಯಕರ್ತರಾದ ಬೈಲೂರು ನಾಗರಾಜ, ಪ್ರಸಾದ,ಶಿವಪ್ಪ, ರಾಮಣ್ಣ, ಶ್ರೀಧರ, ಶೇಖರ,ಶಿವು,ಮಂಜು ಇನ್ನಿತರರು ಉಪಸ್ಥಿತರಿದ್ದರು.